**Bangalore**
**Regional News**
**17.06.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

<u>ಮುಖ್ಯಾಂಶಗಳು</u>

1. ಉನ್ನತ ಶಿಕ್ಷಣದಲ್ಲಿ ಪರಿಸರ ಪಠ್ಯಕ್ರಮ ಜಾರಿಗೆ ತರಲು ಸರ್ಕಾರ ನಿರ್ಧಾರ
2. ಕಾಲ್ತುಳಿತ ಪ್ರಕರಣದಲ್ಲಿ ತಪ್ಪಿತಸ್ಥರ ವಿರುದ್ಧ ನಿರ್ಧಾಕ್ಷಿಣ್ಯ ಕ್ರಮ - ಮುಖ್ಯಮಂತ್ರಿ ಸಿದ್ದರಾಮಯ್ಯ
3. ಬೆಂಗಳೂರು ಕಾಲ್ತುಳಿತ ಪ್ರಕರಣ ; ಮುಖ್ಯಮಂತ್ರಿ, ಗೃಹ ಸಚಿವರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಪ್ರತಿಭಟನೆ
4. ರಾಜ್ಯದಲ್ಲಿ ಕಮಲಹಾಸನ್ ನಟನೆಯ ಥಗ್‌ಲೈಫ್ ಚಿತ್ರ ಬಿಡುಗಡೆ ಮಾಡುವಂತೆ - ಸುಪ್ರೀಂಕೋರ್ಟ್ ಆದೇಶ

<><><><>

ಉನ್ನತ ಶಿಕ್ಷಣದಲ್ಲಿ ಪರಿಸರ ಪಠ್ಯಕ್ರಮವಾಗಬೇಕಿದ್ದು, ಇದು ಅತ್ಯಂತ ಅವಶ್ಯಕವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ವಿಶ್ವ ಪರಿಸರ ದಿನಾಚರಣೆ ೨೦೨೫ ಉದ್ಘಾಟಿಸಿ, ಕರ್ನಾಟಕ ರಾಜ್ಯ ಪರಿಸರ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಅವರು, ಪರಿಸರವನ್ನು ಪಠ್ಯಕ್ರಮವಾಗಿಸುವ ಕೆಲಸವನ್ನು ಸರ್ಕಾರ ಮಾಡಲಿದೆ ಎಂದು ಭರವಸೆ ನೀಡಿದ್ದಾರೆ. ಈ ಬಾರಿಯ ವಿಶ್ವ ಪರಿಸರ ದಿನಾಚರಣೆಯ ಘೋಷವಾಕ್ಯ ಪ್ಲಾಸ್ಟಿಕ್ ಮಾಲಿನ್ಯ ಕೊನೆಗಾಣಿಸಿ ಎಂದಿದೆ. ಇದು ಕಷ್ಟದ ಕೆಲಸವಾದರೂ ನಾವು ಮಾಡಲೇಬೇಕಾಗುತ್ತದೆ. ಪರಿಸರ ಶುದ್ಧವಾಗಿದ್ದರೆ ಜನರ ಆರೋಗ್ಯ, ಪ್ರಕೃತಿಯನ್ನು ಉಳಿಸಿಕೊಳ್ಳಲು ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ : ಸಿದ್ದರಾಮಯ್ಯ

ದುರಾಸೆಯಿಂದ ಪ್ರಕೃತಿಯನ್ನು ನಾಶ ಮಾಡಿದರೆ ನಮ್ಮನ್ನು ನಾವೇ ನಾಶ ಮಾಡಿಕೊಂಡಂತೆ. ರಾಜ್ಯದಲ್ಲಿನ ಪಶ್ಚಿಮ ಘಟ್ಟ, ವೈವಿಧ್ಯಮಯ ಕಾಡು, ನದಿಗಳು, ಜೀವ ಸಂಪತ್ತನ್ನು ನಾವು ಕಾಪಾಡಬೇಕು ಎಂದು ಕರೆ ನೀಡಿದ್ದಾರೆ.

<><><><>

ರಾಜ್ಯದ ಪ್ರತಿಯೊಂದು ಶಾಲೆಗಳಲ್ಲಿ ಪರಿಸರ, ಹವಾಮಾನ ವೈಪರಿತ್ಯ ಜಾಗತಿಕ ಕ್ಲಬ್‌ಗಳನ್ನು ಕಡ್ಡಾಯವಾಗಿ ರಚನೆ ಮಾಡಬೇಕು ಎಂಬ ಆದೇಶ ನೀಡಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ವಿಶ್ವ ಪರಿಸರ ದಿನ ೨೦೨೫ರ ಅಂಗವಾಗಿ ಆಯೋಜಿಸಿದ್ದ ಪರಿಸರ ನಡಿಗೆ ಕಾರ್ಯಕ್ರಮಕ್ಕೆ, ವಿಧಾನ ಸೌಧದ ಮುಂಭಾಗದಲ್ಲಿ ಚಾಲನೆ ನೀಡಿದ ಅವರು, ಕನಿಷ್ಠ ೨೫ ವಿದ್ಯಾರ್ಥಿಗಳನ್ನು ಒಳಗೊಂಡಂತೆ ಜಾಗೃತಿ ಕ್ಲಬ್‌ಗಳನ್ನು ರಚನೆ ಮಾಡಬೇಕೆಂದು ಹೇಳಿದ್ದಾರೆ. ಪ್ರತಿಯೊಬ್ಬ ವಿದ್ಯಾರ್ಥಿ ಒಂದೊಂದು ಸಸಿಯನ್ನು ದತ್ತು ಪಡೆಯಬೇಕೆಂದು ಸಲಹೆ ನೀಡಿದ್ದಾರೆ. ಹಸಿರು ಮತ್ತು ಸ್ವಚ್ಛತೆ ತಮ್ಮ ಸರ್ಕಾರದ ಧ್ಯೇಯ ಎಂದು ಪ್ರತಿಪಾದಿಸಿದ್ದಾರೆ.

<><><><>

ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತ ಘಟನೆಯ ತನಿಖೆಗೆ ರಚಿಸಿರುವ ನಿವೃತ್ತ ನ್ಯಾಯಮೂರ್ತಿ ಮೈಕಲ್ ಜಾನ್ ಕುನ್ಹಾ ಆಯೋಗ ನೀಡುವ ವರದಿ ಆಧರಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ತಮ್ಮ ರಾಜೀನಾಮೆ ಕೇಳುವ ನೈತಿಕ ಹಕ್ಕು ಬಿಜೆಪಿ ನಾಯಕರಿಗಿಲ್ಲ ಎಂದು ಹೇಳಿದ್ದಾರೆ. ತಮ್ಮ ಅಧಿಕಾರವಧಿಯಲ್ಲಿ ನಡೆದಿದ್ದ ಅವಘಡಗಳ ಸಂದರ್ಭದಲ್ಲಿ ಯಾರು ರಾಜೀನಾಮೆ ನೀಡಿದ್ದಾರೆ ಎಂಬ ಬಗ್ಗೆ ಪಟ್ಟಿ ನೀಡಲಿ ಎಂದು ಆಗ್ರಹಿಸಿದ್ದಾರೆ. ಬಿಜೆಪಿ ನಾಯಕರು ಪ್ರತಿಭಟನೆಯಂತಹ ಬೀದಿ ಪ್ರಹಸನ ಕೈಬಿಟ್ಟು ಆತ್ಮಸಾಕ್ಷಿಗೆ ತಕ್ಕಂತೆ ನಡೆದುಕೊಳ್ಳಲಿ ಎಂದು ತಿರುಗೇಟು ನೀಡಿದ್ದಾರೆ.

<><><><>

ಬೆಂಗಳೂರಿನ ಕಾಲ್ತುಳಿತ ಪ್ರಕರಣದಲ್ಲಿ ಕಾಂಗ್ರೆಸ್ ಸರ್ಕಾರದ ವೈಫಲ್ಯ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಗೃಹ ಸಚಿವ ಪರಮೇಶ್ವರ್ ರಾಜೀನಾಮೆಗೆ ಒತ್ತಾಯಿಸಿ ಬಿಜೆಪಿ ಪ್ರತಿಭಟನೆ ನಡೆಸಿತು. ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಪಕ್ಷ ನಾಯಕ ಆರ್. ಅಶೋಕ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಸರ್ಕಾರದ ವಿರುದ್ಧ ಬಿಜೆಪಿ ನಾಯಕರು ಆಕ್ರೋಶ ವ್ಯಕ್ತಪಡಿಸಿದರು. ಪ್ರಚಾರದ ಗೀಳಿಗೆ ಬಿದ್ದ ಕಾಂಗ್ರೆಸ್ ನಾಯಕರು ೧೧ ಜೀವಗಳನ್ನು ಬಲಿತೆಗೆದುಕೊಂಡಿದ್ದಾರೆ ಎಂದು ದೂರಿದರು. ನೈತಿಕ ಹೊಣೆ ಹೊತ್ತು ಈ ಎಲ್ಲಾ ನಾಯಕರು ರಾಜೀನಾಮೆ ನೀಡುವಂತೆ ಆಗ್ರಹಿಸಿದರು.

<><><><>

ರಾಜ್ಯದಲ್ಲಿ ಕಮಲಹಾಸನ್ ನಟನೆಯ ಥಗ್‌ಲೈಫ್ ಚಿತ್ರ ಪ್ರದರ್ಶನಕ್ಕೆ ಅವಕಾಶ ಮಾಡಿಕೊಡುವಂತೆ ರಾಜ್ಯ ಸರ್ಕಾರಕ್ಕೆ ಸುಪ್ರೀಂಕೋರ್ಟ್ ನಿರ್ದೇಶನ ನೀಡಿದೆ. ಕೇಂದ್ರ ಚಲನಚಿತ್ರ ಪ್ರಮಾಣೀಕರಣ ಮಂಡಳಿಯ ಪ್ರಮಾಣ ಪತ್ರ ಹೊಂದಿರುವ ಯಾವುದೇ ಚಿತ್ರವನ್ನು ಬಿಡುಗಡೆ ಮಾಡಬೇಕು ಮತ್ತು ಸರ್ಕಾರ ಅದರ ಪ್ರದರ್ಶನವನ್ನು ಖಚಿತಪಡಿಸಿಕೊಳ್ಳಬೇಕು ಎಂಬುದು ಕಾನೂನಿನ ನಿಮಯ.ಈ ಹಿನ್ನೆಲೆಯಲ್ಲಿ ಚಿತ್ರವನ್ನು ಬಿಡುಗಡೆ ಮಾಡಬೇಕು ಎಂದು ನ್ಯಾಯಮೂರ್ತಿ ಉಜ್ವಲ್ ಭುಯಾನ್ ನೇತೃತ್ವದ ಪೀಠ ಅಭಿಪ್ರಾಯಪಟ್ಟಿದೆ. ಕಮಲಹಾಸನ್ ಹೇಳಿಕೆಯನ್ನು ಒಪ್ಪುವುದು ಹಾಗೂ ಒಪ್ಪದೇ ಇರುವುದು ರಾಜ್ಯದ ಜನರಿಗೆ ಬಿಟ್ಟ ವಿಷಯ. ಆದರೆ ಮೂಲಭೂತ ಹಕ್ಕುಗಳ ರಕ್ಷಣೆ ಆಗಲೇಬೇಕು ಎಂದು ನ್ಯಾಯಾಲಯ ತಿಳಿಸಿದೆ. ನಾಳೆಯೊಳಗೆ ಈ ಕುರಿತಂತೆ ಪ್ರಮಾಣಪತ್ರ ಸಲ್ಲಿಸಲು ರಾಜ್ಯ ಸರ್ಕಾರಕ್ಕೆ ಅವಕಾಶ ನೀಡಿದೆ.

<><><><>

ರಾಜ್ಯದ ವಿವಿಧೆಡೆ ಮಳೆಯಾಗುತ್ತಿದೆ. ಕೊಡಗು ಜಿಲ್ಲೆಯ ಬಹುತೇಕ ಕಡೆ ಧಾರಾಕಾರ ಮಳೆ ಆಗುತ್ತಿದ್ದು ಸಾಮಾನ್ಯ ಜನಜೀವನ ವ್ಯತ್ಯಯಗೊಂಡಿದೆ. ಭಾರಿ ಮಳೆ ಹಿನ್ನೆಲೆಯಲ್ಲಿ ಅಂಗನವಾಡಿ ಪ್ರಾಥಮಿಕ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜಿಗೆ ಜಿಲ್ಲಾಧಿಕಾರಿಗಳು ರಜೆ ನೀಡಿದ್ದಾರೆ. ಧಾರಾಕಾರ ಮಳೆ ಮುಂದುವರೆದಿರುವ ಹಿನ್ನೆಲೆಯಲ್ಲಿ ಗಾಳಿಯಿಂದಾಗಿ ಅಲ್ಲಲ್ಲಿ ಮರಗಳು ವಿದ್ಯುತ್ ತಂತಿ ಮೇಲೆ ಬಿದ್ದು ಗ್ರಾಮೀಣ ಪ್ರದೇಶಗಳಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಸಾಧಾರಣ ಮಳೆ ಮುಂದುವರೆದಿದೆ. ಮಲೆನಾಡು ಭಾಗದಲ್ಲಿ ಗಾಳಿ ಸಹಿತ ಮಳೆಯಾಗುತ್ತಿದ್ದು ಕಳಸ ತಾಲ್ಲೂಕಿನ ಮರಸಣಿಗೆ ಗ್ರಾಮದಲ್ಲಿ ಮನೆಯೊಂದರ ಮೇಲೆ ಮರದ ರೆಂಬೆ ಬಿದ್ದು ಮಹಿಳೆಯೊಬ್ಬರು ಗಾಯಗೊಂಡಿದ್ದಾರೆ. ಕೊಪ್ಪ ತಾಲ್ಲೂಕಿನ ಹೊಸೂರು ಗ್ರಾಮದಲ್ಲಿ ಮಳೆಯಿಂದ ಮನೆಯೊಂದರ ಗೋಡೆ ಕುಸಿದು ಬಿದ್ದಿದೆ. ಕೊಪ್ಪ, ಶೃಂಗೇರಿ ತಾಲೂಕಿನ ಹಲವೆಡೆ ಮರಗಳು ಬಿದ್ದು ವಿದ್ಯುತ್ ಕಂಬಳೀಗೆ ಹಾನಿ ಉಂಟಾಗಿದೆ. ಜಿಲ್ಲೆಯ ತುಂಗಾ, ಭದ್ರಾ, ಹೇಮಾವತಿ ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿವೆ.

<><><><>

ಕರಾವಳಿ ಜಿಲ್ಲೆಗಳಲ್ಲಿ ವ್ಯಾಪಕವಾಗಿ ಮಳೆಯಾಗಿದೆ. ಉತ್ತರ ಹಾಗೂ ದಕ್ಷಿಣ ಒಳನಾಡಿನ ಕೆಲವೆಡೆ ಮಳೆಯಾಗಿದೆ. ಭಾಗಮಂಡಲದಲ್ಲಿ ೧೯ ಸೆಂಟಿ ಮೀಟರ್ ಮಳೆಯಾಗಿದೆ. ಕರಾವಳಿ ಜಿಲ್ಲೆಗಳಲ್ಲಿ ಇಂದಿನಿಂದ ಇದೇ ೨೧ರವರೆಗೆ ವ್ಯಾಪಕ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಡಾ. ಸಿ.ಎಸ್. ಪಾಟೀಲ್ ಮುನ್ಸೂಚನೆ ನೀಡಿದ್ದಾರೆ.

ಧ್ವನಿ : ಡಾ. ಸಿ.ಎಸ್. ಪಾಟೀಲ್ (೩೧ ಸೆಕೆಂಡ್‌ಗಳು)

<><><><>

ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಹಿನ್ನಲೆಯಲ್ಲಿ ಬೆಳಗಾವಿಯಲ್ಲಿ ಜಿಲ್ಲಾಡಳಿತ, ಆಯುಷ್ ಇಲಾಖೆ, ಆಯರ್ವೇದ ಕಾಲೇಜುಗಳು, ಖಾಸಗಿ ಸಂಸ್ಥೆಗಳ ಮೂಲಕ ಭರದ ಸಿದ್ಧತೆ ನಡೆಯುತ್ತಿದೆ. ಯೋಗ ತರಬೇತುದಾರ ಉಮೇಶ ಕಲಘಟಗಿ ಅವರ ನೇತೃತ್ವದಲ್ಲಿ ನಗರದ ಈಜುಗೊಳದಲ್ಲಿ ಜಲಯೋಗಕ್ಕೆ ೫೦ಕ್ಕೂ ಅಧಿಕ ಸಂಖ್ಯೆಯಲ್ಲಿ ಈಜುಪಟುಗಳು ನಿತ್ಯ ತರಬೇತಿ ಪಡೆಯುತ್ತಿದ್ದಾರೆ. ಕೆ.ಎಲ್.ಇ. ಕಂಕಣವಾಡಿ ಆರ್ಯುವೇದ ಮಹಾವಿದ್ಯಾಲಯ ಎರಡು ಹಳ್ಳಿಗಳಲ್ಲಿ ಯೋಗ ಜಾಗೃತಿ ಜಾಥ ನಡೆಸಿದೆ. ಇಂದು ವಿವಿಧ ವಯೋಮಾನದವರಿಗೆ ಯೋಗದ ವಿವಿಧ ಸ್ಪರ್ಧೆಗಳನ್ನು ಆಯೋಜಿಸಿದೆ. ಇದೇ ೨೧ ರಂದು ಸುವರ್ಣ ಸೌಧದ ಎದುರು ನಡೆಯುವ ಯೋಗ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ಪಾಲ್ಗೊಳ್ಳಲಿದ್ದಾರೆ ಎಂದು ಆಕಾಶವಾಣಿಗೆ ಬೆಳಗಾವಿ ಆಯುಷ್ಯ ಇಲಾಖೆಯ ಅಧಿಕಾರಿ ಶ್ರೀಕಾಂತ ಸುಣದೋಳಿ ಮಾಹಿತಿ ನೀಡಿದ್ದಾರೆ.

ಧ್ವನಿ : ಶ್ರೀಕಾಂತ ಸುಣದೋಳಿ (೨೩ ಸೆಕೆಂಡ್‌ಗಳು)

<><><><>

ಕೋಲಾರ ಜಿಲ್ಲೆಯಲ್ಲಿ ಸರ್ಕಾರಿ ಜಮೀನುಗಳಲ್ಲಿ ರೈತರಿಗೆ ಮಂಜೂರಾಗಿರುವ ಜಮೀನುಗಳಿಗೆ ಪೋಡಿ ದುರಸ್ತಿ ಮಾಡಲಾಗುತ್ತಿದೆ. ೮ ಸಾವಿರದ ೬೨೩ ಸರ್ವೆ ನಂಬರ್‌ಗಳ ಪೈಕಿ ಭೂ ಮಂಜೂರಾತಿಯಾಗಿರುವ ೬ ಸಾವಿರದ ೧೦೮ ಸರ್ವೆ ನಂಬರ್‌ಗಳಲ್ಲಿನ ೨೫ ಸಾವಿರದ ೮೧೦ ಪ್ರಕರಣಗಳನ್ನು ಗುರುತಿಸಿ ಬಿ.ಎಂ.ಸಿ ತಂತ್ರಾಂಶದಲ್ಲಿ ದಾಖಲಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್ ರವಿ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>